ಸಿಂಧನೂರು 100 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯ ಕಾಮಗಾರಿ ಸ್ಥಗಿತಗೊಂಡಿರುವುದು

429 (383) ಶ್ರೀ ನಾಡಗೌಡ ವೆಂಟಕರಾವ್ (ಸಿಂಧನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆ ಸಿಂಧನೂರಿನಲ್ಲಿ ನೂರು ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು;

ಆ) ಈಗ ಸರ್ಕಾರಿ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಯಾವ ಹಂತದಲ್ಲಿದೆ;

ಇ) ಸಕಾರಿ ಆಸ್ಪತ್ರೆಯ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಮೇಲ್ಕಂಡ ಆಸ್ಪತ್ರೆಗೆ ಸರ್ಕಾರ ಮೂಲಭೂತ ಸೌಲಭ್ಯಗಳನ್ನು ಒದಗಿಸಿದೆಯೇ; ಹಾಗಿದ್ದಲ್ಲಿ, ಯಾವಾಗ ಒದಗಿಸಲಾಗುವುದು;

ಉ) ಮೂಲಭೂತ ಸೌಲಭ್ಯಗಳ ಅನುಕೂಲಕ್ಕಾಗಿ ಸರ್ಕಾರ ನಿಗಧಿಪಡಿಸಿದ್ದ ಅನುದಾನವೆಷ್ಟು;

ಊ) ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; ವಿವರಗಳನ್ನು ನೀಡುವುದು;

ಋ) ಸಿಂಧನೂರು ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿಯಿರುವ ತಾಂತ್ರಿಕ ಹಾಗೂ ವೈದ್ಯಕೀಯ ಸಿಬ್ಬಂದಿ ಭರ್ತಿ ಮಾಡಲಾಗಿದೆಯೇ;

ಎ) ಸಾರ್ವಜನಿಕರ ಹಿತದೃಷ್ಟಿಯಿಂದ ಶೀಘ್ರವಾಗಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಯಚೂರು ಜಿಲ್ಲೆ ಸಿಂಧನೂರಿನಲ್ಲಿ 100 ಹಾಸಿಗೆಗಳ ಸರ್ಕಾರಿ ಆಸ್ಪತ್ರೆಯ ಕಟ್ಟಡ ಕಾಮಗಾರಿಯನ್ನು ದಿನಾಂಕ: 21–3–07 ರಂದು ಪ್ರಾರಂಭಿಸಲಾಯಿತು.

ಆ) ಮುಖ್ಯ ಆಸ್ಪತ್ರೆ ಕಟ್ಟಡ ಕಾಮಗಾರಿಯು ಪೂರ್ಣಗೊಂಡಿದ್ದು, ಆಸ್ಪತ್ರೆ ಕಟ್ಟಡವನ್ನು ದಿನಾಂಕ: 27–06–09ರಲ್ಲಿ ಹಸ್ತಾಂತರಿಸಿಕೊಳ್ಳಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಆಸ್ಪತ್ರೆ ಕಟ್ಟಡಕ್ಕೆ ಸಂಬಂಧಿಸಿದಂತೆ ಮೂಲಭೂತ ಸೌಕರ್ಯಗಳಾದ ನೀರು ಸರಬರಾಜು, ವಿದ್ಯುತ್ ಜನರೇಟರ್ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.

ಉ) ಮತ್ತು ಊ) ಕಟ್ಟಡ ಕಾಮಗಾರಿಯ ಮೂಲ ಅಂದಾಜಿನಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಕ್ಕೆ ಅವಕಾಶ ಕಲ್ಪಿಸಲಾಗಿದೆ.

ಹೆಚ್ಚುವರಿಯಾಗಿ ಮೂಲಭೂತ ಅವಶ್ಯಕತೆಗಳನ್ನು ಪೂರೈಸಿಕೊಳ್ಳಲು ಸ್ಥಳೀಯ ಮುಕ್ತ ನಿಧಿಯಾಗಿ ರೂ.2.50 ಲಕ್ಷಗಳನ್ನು ಒದಗಿಸಿದ್ದು, ಆರೋಗ್ಯ ರಕ್ಷಾ ಸಮಿತಿಗೆ ಅನುಮೋದಿತ ಮಾರ್ಗಸೂಚಿಯಂತೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

ಋ) ಸಿಂಧನೂರು ಸರ್ಕಾರಿ ಆಸ್ಪತ್ರೆಯಲ್ಲಿ 10 ವೈದ್ಯರ ಹುದ್ದೆ ಮಂಜೂರಾಗಿದ್ದು 7 ಹುದ್ದೆಗಳು ಭರ್ತಿಯಾಗಿದ್ದು, 3 ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ. 2 ದಂತ ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 58 ಇತರೇ ಸಿಬ್ಬಂದಿ ಹುದ್ದೆಗಳು ಮಂಜೂರಾಗಿದ್ದು 17 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 41 ಹುದ್ದೆಗಳು ಖಾಲಿ ಇವೆ.

ಎ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡ ಕ್ರಮದ ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಅನುಬಂಧ – 1

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

1. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸ ಲಾಗುವುದು.
2. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಟ ರೂ. 50,000 ರವರೆಗೆ ಗೌರವಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ

ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ.500, (2) ಅರೆವಳಿಕೆ ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

3. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ:2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ.5,000 ಗೌರವ ಧನ ನೀಡಿ ರಿಟೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ.1;000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.

7. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.